## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** "ಶಕ್ತಿ ಯೋಜನೆ"ಯಡಿ ಮೇ-2026 ಮತ್ತು ಜೂನ್-2026ರ ಮಾಹೆಗಳ ಅನುದಾನವನ್ನು ಬಿಡುಗಡೆ ಮಾಡುವ ಬಗ್ಗೆ.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ಸಾರಿಇ 96 ಸ್ಟೀರಸ 2026, ದಿನಾಂಕ:21.04.2026.
2. ಸರ್ಕಾರದ ಆದೇಶ ಸಂಖ್ಯೆ: ಟಿಡಿ 18 ಟಿಸಿಬಿ 2023, ದಿನಾಂಕ:05.06.2023 ಮತ್ತು ಆದೇಶ ಸಂಖ್ಯೆ: ಟಿಡಿ 18 ಟಿಸಿಬಿ 2023 (ಭಾಗ-1), ದಿನಾಂಕ: 11.09.2023, 02.03.2024, 05.05.2025 ಮತ್ತು 28.11.2025.
3. ಸರ್ಕಾರದ ಆದೇಶ ಸಂಖ್ಯೆ: ಟಿಡಿ 227 ಟಿಸಿಬಿ 2023 (ಭಾಗ-1), ದಿನಾಂಕ: 24.02.2026.
4. ಸರ್ಕಾರದ ಆದೇಶ ಸಂಖ್ಯೆ: ಟಿಡಿ 27 ಟಿಸಿಬಿ 2025 (ಭಾ-1), ದಿನಾಂಕ:27.03.2026.
5. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ ಇವರ ಪತ್ರ ಸಂಖ್ಯೆ: ಕರಾಸಾ:ಕೇಕ:ಸಂ.ಸಿ3:263/223:2026-27, ದಿನಾಂಕ:19.05.2026 ಮತ್ತು ದಿನಾಂಕ:12.05.2026.

**ಪ್ರಸ್ತಾವನೆ**:-

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಸರ್ಕಾರದ ಆದೇಶದಲ್ಲಿ, 2026-27ನೇ ಸಾಲಿನ ಆಯವ್ಯಯದಲ್ಲಿ ಶಕ್ತಿ ಯೋಜನೆಗಾಗಿ ಲೆಕ್ಕ ಶೀರ್ಷಿಕೆ 3055-00-190-0-16-106-ಸಹಾಯಧನದಡಿ ರೂ.376300.00 ಲಕ್ಷಗಳು, 3055-00-190-0-16-422-ಪರಿಶಿಷ್ಟ ಜಾತಿ ಉಪ ಯೋಜನೆಯಡಿ (SCSP) ರೂ.106000.00 ಲಕ್ಷಗಳು ಹಾಗೂ 3055-00-190-0-16-423-ಗಿರಿಜನ ಉಪ ಯೋಜನೆರಡಿ (TSP) ರೂ.47700.00 ಲಕ್ಷಗಳು ಸೇರಿದಂತೆ, ಒಟ್ಟಾರೆ ರೂ.530000.00 ಲಕ್ಷಗಳನ್ನು ಹಂಚಿಕೆ ಮಾಡಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಸರ್ಕಾರದ ಆದೇಶಗಳಲ್ಲಿ ರಾಜ್ಯದ ನಾಲ್ಕು ಸಾರಿಗೆ ಸಂಸ್ಥೆಗಳಾದ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ (ಕ.ರಾ.ರ.ಸಾ.ನಿ), ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ (ಬೆಂ.ಮ.ಸಾ.ಸಂಸ್ಥೆ), ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ (ವಾ.ಕ.ರ.ಸಾ.ಸಂಸ್ಥೆ), ಮತ್ತು ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮಗಳ (ಕ.ಕ.ರ.ಸಾ.ನಿಗಮ) ಸಾರಿಗೆಗಳಲ್ಲಿ ಕರ್ನಾಟಕ ರಾಜ್ಯಾದ್ಯಂತ ನಗರ, ಸಾಮಾನ್ಯ ಹಾಗೂ ವೇಗದೂತ (Express) ಬಸ್ಸುಗಳಲ್ಲಿ ಕರ್ನಾಟಕ ರಾಜ್ಯದ (Domicile of Karnataka) ಎಲ್ಲಾ ಮಹಿಳೆಯರು (ವಿದ್ಯಾರ್ಥಿನಿಯರು ಸೇರಿದಂತೆ) ಮತ್ತು ಲಿಂಗತ್ವ ಅಲ್ಪಸಂಖ್ಯಾತರು ಉಚಿತವಾಗಿ ಪ್ರಯಾಣಿಸಲು ಕೆಲವು ಷರತ್ತುಗಳನ್ನು ವಿಧಿಸಿ ದಿನಾಂಕ:11.06.2023ರಿಂದ ಶಕ್ತಿ ಯೋಜನೆಯನ್ನು ಜಾರಿಗೊಳಿಸಲು ಆಡಳಿತಾತ್ಮಕ ಅನುಮೋದನೆ ನೀಡಿ ಆದೇಶಿಸಲಾಗಿದೆ ಹಾಗೂ ನಾಲ್ಕು ಸಾರಿಗೆ ಸಂಸ್ಥೆಗಳ ವ್ಯಾಪ್ತಿಯ ಜಿಲ್ಲೆಗಳಿಗೆ ಹೊಂದಿಕೊಂಡಿರುವ ನೆರೆ ರಾಜ್ಯದ ಗ್ರಾಮ/ ಸ್ಥಳಗಳಿಗೆ ಕಾರ್ಯಾಚರಿಸುತ್ತಿರುವ ಕೆಲವು ಆಯ್ದ ಅಂತರರಾಜ್ಯ ಸಾರಿಗೆಗಳಲ್ಲಿ, ರಾಜ್ಯದ ಗಡಿಯವರೆಗೆ

(ಕರ್ನಾಟಕ ರಾಜ್ಯದ ಒಳಗಡೆ ಮಾತ್ರ) ಮತ್ತು ಎನ್‌ಕ್ಲೇವ್ ಸಾರಿಗೆಗಳಲ್ಲಿ ಮಹಿಳೆಯರಿಗೆ ಉಚಿತ ಪ್ರಯಾಣಕ್ಕೆ "ಶಕ್ತಿ ಯೋಜನೆ"ಯಡಿ ಅವಕಾಶ ಕಲ್ಪಿಸಿರುವ ಸಾರಿಗೆ ನಿಗಮಗಳ ಕ್ರಮಕ್ಕೆ ಘಟನೋತ್ತರ ಅನುಮೋದನೆ ನೀಡಿ ಆದೇಶಿಸಲಾಗಿದೆ ಮತ್ತು ಶಕ್ತಿ ಸ್ಮಾರ್ಟ್ ಕಾರ್ಡ್‌ಗಳನ್ನು ವಿತರಿಸುವ ಪ್ರಕ್ರಿಯೆಯ ಅವಧಿಯನ್ನು ದಿನಾಂಕ:11.06.2023 ರಿಂದ ದಿನಾಂಕ:10.03.2026 ರವರೆಗೆ ವಿಸ್ತರಿಸಿ, ಸದರಿ ಕಾಲಾವಧಿಯೊಳಗಾಗಿ ಪ್ರಕ್ರಿಯೆಯನ್ನು ಪೂರ್ಣಗೊಳಿಸತಕ್ಕದ್ದು ಎಂದು ಸಹ ಆದೇಶಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (3)ರ ಸರ್ಕಾರದ ಆದೇಶದಲ್ಲಿ ರಾಜ್ಯದ ನಾಲ್ಕು ಸಾರಿಗೆ ಸಂಸ್ಥೆಗಳಾದ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ (ಕ.ರಾ.ರ.ಸಾ.ನಿಗಮ), ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ (ಬೆಂ.ಮ.ಸಾ.ಸಂಸ್ಥೆ), ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ (ವಾ.ಕ.ರ.ಸಾ.ಸಂಸ್ಥೆ) ಹಾಗೂ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮಗಳು (ಕ.ಕ.ರ.ಸಾ.ನಿಗಮ) ಮತ್ತು ಭವಿಷ್ಯದಲ್ಲಿ ಪಾಲ್ಗೊಳ್ಳಬಹುದಾದ ಇತರ ಪಾಲುದಾರರುಗಳನ್ನೊಳಗೊಂಡಂತೆ (ಬಿಎಂಆರ್‌ಸಿಎಲ್, ಕೆ-ರೈಡ್, ಪಾರ್ಕಿಂಗ್ ಪ್ರಾಧಿಕಾರಗಳು ಇತ್ಯಾದಿ.,) ಶಕ್ತಿ ಯೋಜನೆಯ ಫಲಾನುಭವಿಗಳಾದ ಮಹಿಳೆಯರು ಮತ್ತು ಲಿಂಗತ್ವ ಅಲ್ಪಸಂಖ್ಯಾತರಿಗೆ ಶಕ್ತಿ ಸ್ಮಾರ್ಟ್ ಕಾರ್ಡ್‌ಗಳನ್ನು ಉಚಿತವಾಗಿ ಒದಗಿಸುವ ಷರತ್ತಿಗೊಳಪಟ್ಟು ಶಕ್ತಿ ಸ್ಮಾರ್ಟ್ ಕಾರ್ಡ್ ಯೋಜನೆಯನ್ನು ಅನುಷ್ಠಾನಗೊಳಿಸಲು ಅನುಮೋದನೆ ನೀಡಿ ಆದೇಶಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (4)ರ ಸರ್ಕಾರದ ಆದೇಶದಲ್ಲಿ ರಾಜ್ಯದ ನಾಲ್ಕು ಸಾರಿಗೆ ಸಂಸ್ಥೆಗಳಿಗೆ 2026-27ನೇ ಸಾಲಿನಲ್ಲಿ ಶಕ್ತಿ ಯೋಜನೆಯ ಅನುಷ್ಠಾನಕ್ಕಾಗಿ ರೂ.50000.00 ಲಕ್ಷಗಳನ್ನು ಮುಂಗಡವಾಗಿ ಬಿಡುಗಡೆಗೊಳಿಸಿ ಆದೇಶಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (5)ರ ಪತ್ರಗಳಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ ಇವರು ಪ್ರಸ್ತಾವನೆ ಸಲ್ಲಿಸುತ್ತಾ, ಸಾರಿಗೆ ನಿಗಮಗಳಲ್ಲಿ ಏಪ್ರಿಲ್-2026ರ ಮಾಹೆಯಲ್ಲಿ ಶಕ್ತಿಯೋಜನೆಯ ವಾಸ್ತವಿಕ ವೆಚ್ಚ ಮತ್ತು ಬಿಡುಗಡೆಗೊಳಿಸಿರುವ ಅನುದಾನ ಮೊತ್ತದಲ್ಲಿನ ಒಟ್ಟಾರೆ ಕೊರತೆ ಮೊತ್ತ ರೂ.176.46 ಕೋಟಿಗಳಾಗಿದ್ದು, ಮೇ-2026ರ ಮಾಹೆಯಲ್ಲಿ ನಾಲ್ಕು ಸಾರಿಗೆ ನಿಗಮಗಳ ವಾಸ್ತವಿಕ ವೆಚ್ಚ ರೂ.700.00 ಕೋಟಿಗಳಾಗಬಹುದೆಂದು ಅಂದಾಜಿಸಲಾಗಿದೆ. ರಾಜ್ಯ ಸಾರಿಗೆ ನಿಗಮಗಳು ನಿರಂತರವಾಗಿ ನಗದು ಕೊರತೆಯನ್ನು ಅನುಭವಿಸುತ್ತಿರುವುದರಿಂದ, ನೌಕರರ ವೇತನ ಹಾಗೂ ಇತರೆ ಅತ್ಯಾವಶ್ಯಕ / ತುರ್ತು ಪಾವತಿಗಳಿಗೆ ಸರ್ಕಾರವು ನೀಡುವ ಅನುದಾನದ ಮೇಲೆಯೇ ಅವಲಂಬಿತವಾಗಿರುತ್ತವೆ. ಆದ್ದರಿಂದ, ಸರ್ಕಾರವು 2026-27ನೇ ಸಾಲಿನಲ್ಲಿ ಶಕ್ತಿ ಯೋಜನೆಗೆ ಆಯವ್ಯಯದಲ್ಲಿ ಹಂಚಿಕೆಯಾದ ರೂ.5300.00 ಕೋಟಿ ಅನುದಾನವನ್ನು ನಾಲ್ಕು ಸಾರಿಗೆ ನಿಗಮಗಳಿಗೆ ಮಾಹೆಯಾನ ಮುಂಗಡವಾಗಿ ಬಿಡುಗಡೆಗೊಳಿಸುವಂತೆ ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಿ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**<u>ಸರ್ಕಾರದ ಆದೇಶ ಸಂಖ್ಯೆ: ಟಿಡಿ 57 ಟಿಸಿಬಿ 2026, ಬೆಂಗಳೂರು, ದಿನಾಂಕ:04-06-2026.</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ರಾಜ್ಯದ ನಾಲ್ಕು ಸಾರಿಗೆ ಸಂಸ್ಥೆಗಳಾದ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ, ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ, ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ ಮತ್ತು ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮಗಳ ಸಾರಿಗೆಗಳಲ್ಲಿ ಶಕ್ತಿ ಯೋಜನೆಯಡಿ ಮೇ-2026 ಮತ್ತು ಜೂನ್-2026ರ ಮಾಹೆಯಲ್ಲಿ ರಾಜ್ಯದ ಮಹಿಳೆಯರು ಉಚಿತವಾಗಿ ಪ್ರಯಾಣಿಸಲು ವಿತರಿಸಲಾಗಿರುವ / ವಿತರಿಸಲಾಗುವ ಶೂನ್ಯ

Pushpa V.S.

ಟಿಕೇಟ್‌ಗಳ ವೆಚ್ಚಕ್ಕೆ ರೂ.86000.00 ಲಕ್ಷಗಳನ್ನು (ಎಂಬತ್ತಾರು ಸಾವಿರ ಲಕ್ಷ ರೂಪಾಯಿಗಳು ಮಾತ್ರ) ಈ ಕೆಳಕಂಡಂತೆ ಷರತ್ತುಗಳಿಗೊಳಪಟ್ಟು ಶೇಕಡವಾರು ಅನುಪಾತದನ್ವಯ ನಿಗಮವಾರು ಬಿಡುಗಡೆಗೊಳಿಸಿ ಆದೇಶಿಸಿದೆ.

**(ರೂ. ಲಕ್ಷಗಳಲ್ಲಿ)**

| ಸಂಸ್ಥೆಗಳು | ಮೇ ಮತ್ತು ಜೂನ್ -2026 ಲೆಕ್ಕ ಶೀರ್ಷಿಕೆ | | | ಒಟ್ಟು |
|---|---|---|---|---|
| | 3055-00-190-0-16-106- ಸಹಾಯಧನ | 3055-00-190-0-16-422- ಎಸ್.ಸಿ.ಎಸ್.ಪಿ. | 3055-00-190-0-16-423- ಟಿ.ಎಸ್.ಪಿ | ಬಿಡುಗಡೆ ಮೊತ್ತ |
| ಕ.ರಾ.ರ.ಸಾ.ನಿಗಮ | 23337.13 | 6573.84 | 2958.23 | 32869.20 |
| ಬೆಂ.ಮ.ಸಾ.ಸಂಸ್ಥೆ | 11137.34 | 3137.28 | 1411.78 | 15686.40 |
| ವಾ.ಕ.ರ.ಸಾ.ಸಂಸ್ಥೆ | 14965.81 | 4215.72 | 1897.07 | 21078.60 |
| ಕ.ಕ.ರ.ಸಾ.ನಿಗಮ | 11619.72 | 3273.16 | 1472.92 | 16365.80 |
| **ಒಟ್ಟು** | 61060.00 | 17200.00 | 7740.00 | 86000.00 |

**ಷರತ್ತುಗಳು:**

1. ನಾಲ್ಕು ಸಾರಿಗೆ ಸಂಸ್ಥೆಗಳು ಮೇ-2026 ಮತ್ತು ಜೂನ್-2026ರ ಮಾಹೆಯ ವಾಸ್ತವಿಕ ವೆಚ್ಚದ ಕ್ರೋಢೀಕೃತ ವಿವರಗಳನ್ನು (ವಿಭಾಗವಾರು) ಶಕ್ತಿ ಯೋಜನೆಯ ನೋಡಲ್ ಸಂಸ್ಥೆಯಾದ ಕ.ರಾ.ರ.ಸಾ. ನಿಗಮವು ಸರ್ಕಾರಕ್ಕೆ ಸಲ್ಲಿಸತಕ್ಕದ್ದು.
2. ಶಕ್ತಿ ಸ್ಮಾರ್ಟ್ ಕಾರ್ಡ್‌ಗಳನ್ನು ಆದಷ್ಟು ಶೀಘ್ರವಾಗಿ ವಿತರಿಸಲು ಅಗತ್ಯ ಕ್ರಮ ಕೈಗೊಳ್ಳತಕ್ಕದ್ದು.
3. ನಾಲ್ಕು ಸಾರಿಗೆ ಸಂಸ್ಥೆಗಳು ಬಿಡುಗಡೆ ಮಾಡಿರುವ ಅನುದಾನದ ಬಳಕೆ ಪ್ರಮಾಣ ಪತ್ರಗಳನ್ನು ಕಡ್ಡಾಯವಾಗಿ ಸಲ್ಲಿಸತಕ್ಕದ್ದು.

ಬಿಡುಗಡೆ ಮಾಡಿರುವ ಅನುದಾನವನ್ನು ನಾಲ್ಕು ಸಾರಿಗೆ ಸಂಸ್ಥೆಗಳ ವ್ಯವಸ್ಥಾಪಕ ನಿರ್ದೇಶಕರುಗಳು ಆಯುಕ್ತರು, ಸಾರಿಗೆ ಮತ್ತು ರಸ್ತೆ ಸುರಕ್ಷತೆ, ಬೆಂಗಳೂರು ಇವರಿಂದ ಪೇಯೀಸ್ ರಶೀದಿಗೆ ಮೇಲು ರುಜು ಪಡೆದು ರಾಜ್ಯ ಹುಜೂರು ಖಜಾನೆಯಿಂದ ಡ್ರಾ ಮಾಡಲು ಅನುಮತಿ ನೀಡಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಹಿಂಬರಹ ಸಂಖ್ಯೆ: ಆಇ 232 ವೆಚ್ಚ-11/2026, ದಿನಾಂಕ:30.05.2026ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

Pushpa v.s.

**(ಪುಷ್ಪ ವಿ.ಎಸ್.)**
ಸರ್ಕಾರದ ಅಧೀನ ಕಾರ್ಯದರ್ಶಿ,
ಸಾರಿಗೆ ಇಲಾಖೆ.

**ಇವರಿಗೆ:-**

1. ಪ್ರಧಾನ ಮಹಾಲೇಖಪಾಲರು,ಆಡಿಟ್-II/ (ಎ&ಇ) ಕರ್ನಾಟಕ, ಹೊಸ ಕಟ್ಟಡ, “ಆಡಿಟ್ ಭವನ” ಅಂಚೆ ಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು.

2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
3. ಆಯುಕ್ತರು, ಸಾರಿಗೆ ಮತ್ತು ರಸ್ತೆ ಸುರಕ್ಷತೆ, ಬೆಂಗಳೂರು.
4. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ, ಬೆಂಗಳೂರು.
5. ವ್ಯವಸ್ಥಾಪಕ ನಿರ್ದೇಶಕರು, ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ, ಬೆಂಗಳೂರು.
6. ವ್ಯವಸ್ಥಾಪಕ ನಿರ್ದೇಶಕರು, ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ, ಹುಬ್ಬಳ್ಳಿ.
7. ವ್ಯವಸ್ಥಾಪಕ ನಿರ್ದೇಶಕರು, ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ, ಕಲಬುರಗಿ.
8. ಜಂಟಿ ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
9. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಸಾರಿಗೆ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
10. ಸರ್ಕಾರದ ಉಪ ಕಾರ್ಯದರ್ಶಿ/ ಅಧೀನ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಸಾರಿಗೆ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
11. ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿ.